**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

# O.S. No. 227/2023

| | | |
|---|---|---|
| ಸಾಕ್ಷಿದಾರರ ಹೆಸರು | : | ಎಂ.ಎಲ್. ಮಹೇಶ |
| ತಂದೆಯ ಹೆಸರು | : | ಎಂ.ಎನ್. ಲಿಂಗಯ್ಯ |
| ವಯಸ್ಸು | : | 73 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಮುಳ್ಳೂರು ಗ್ರಾಮ, ಸರಗೂರು ತಾ. |

**ಸಾಕ್ಷಿಯನ್ನು ದಿನಾಂಕಃ 19.07.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಜಿ.ಪಿ.ಆರ್. ವಕೀಲರಿಂದಃ**

ವಾದಿ ನನ್ನ ಮಗನಾಗಿದ್ದು, ನನ್ನ ಪರವಾಗಿ ಒಂದು ಸಾಮಾನ್ಯ ಮುಖ್ತ್ಯಾರ್ ನಾಮೆಯನ್ನು ಬರೆದುಕೊಟ್ಟಿರುತ್ತಾರೆ. ಆದ್ದರಿಂದ ನಾನು ಈ ಪ್ರಕರಣದಲ್ಲಿ ವಾದಿಯ ಮುಖ್ತ್ಯಾರ್ ನಾಮೆದಾರನಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿನಾಂಕಃ 21.02.2007ರ ನೋಂದಣಿ ಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-1 ಎಂದು ಗುರುತಿಸಲಾಯಿತು.

ಸ.ನಂ. 158 ಕ್ಕೆ ಸಂಬಂಧಿಸಿದ 02 ಪುಟಗಳುಳ್ಳ ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-2 ಎಂದು ಗುರುತಿಸಲಾಯಿತು.

01 ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-3 ಎಂದು ಗುರುತಿಸಲಾಯಿತು.

04 ಕಂದಾಯ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-4 ರಿಂದ ನಿ.ಪಿ.-7 ಎಂದು ಗುರುತಿಸಲಾಯಿತು.

ಸರಗೂರು ಪೋಲೀಸ್ ಠಾಣೆಯವರು ನೀಡಿರುವ 02 ಹಿಂಬರಹ ಮತ್ತು 03 ಸ್ವೀಕೃತಿಗಳನ್ನು ಹಾಜರುಪಡಿಸಿದ್ದೇನೆ. 02 ಹಿಂಬರಹವನ್ನು ಕ್ರಮವಾಗಿ ನಿ.ಪಿ.-8 ಮತ್ತು ನಿ.ಪಿ.-9 ಎಂದು ಮತ್ತು 03 ಸ್ವೀಕೃತಿಗಳನ್ನು ಕ್ರಮವಾಗಿ ನಿ.ಪಿ.-10 ರಿಂದ ನಿ.ಪಿ.-12 ಎಂದು ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂಧಿಸಿದ 06 ಭಾವಚಿತ್ರಗಳು ಮತ್ತು 01 ಸಿ.ಡಿ. ಯನ್ನು ಹಾಜರುಪಡಿಸಿದ್ದೇನೆ. 06 ಭಾವಚಿತ್ರಗಳನ್ನು ಕ್ರಮವಾಗಿ ನಿ.ಪಿ.-13 ರಿಂದ ನಿ.ಪಿ.-18 ಎಂದು ಮತ್ತು 01 ಸಿ.ಡಿ.ಯನ್ನು ನಿ.ಪಿ.-19 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ವಾದಿ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**